ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂ: ಕಾಶಿಇ:ಶೈವಿ:04:ಸುತ್ತೋಲೆ:2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು

ದಿನಾಂಕ: 03-05-2020

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿವರ್ಗದವರು ಕರ್ತವ್ಯಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ ಸರ್ಕಾರದ ಸುತ್ತೋಲೆ ಸಂ: ಸಿಆಸುಇ 123 ಡಿಬಿಎಂ 2020 (ಭಾಗ) ದಿನಾಂಕ:02.05.2020.

>>>>><<<<

ಸೂಚಿತ ವಿಷಯ ಹಾಗೂ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವಂತೆ ದಿನಾಂಕ:04.05.2020ರಿಂದ ಅನ್ವಯಿಸುವಂತೆ ಕೆಂಪು ವಲಯದ (ಬೆಂಗಳೂರು, ಬೆಂಗಳೂರು ಗ್ರಾಮಾಂತರ ಹಾಗೂ ಮೈಸೂರು) ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಕಛೇರಿಗಳು ಹಾಗೂ ಸರ್ಕಾರಿ /ಖಾಸಗಿ ಅನುದಾನಿತ ಕಾಲೇಜುಗಳ ಗ್ರೂಪ್ ಎ ಮತ್ತು ಬಿ (ಬೋಧಕ ಮತ್ತು ಬೋಧಕೇತರ) ವೃಂದದ ಎಲ್ಲಾ ಅಧಿಕಾರಿಗಳು ಹಾಗೂ ಗ್ರೂಪ್ ಸಿ ಮತ್ತು ಡಿ ವೃಂದದ ಶೇಕಡಾ 33ರಷ್ಟು ಕಛೇರಿ ಸಿಬ್ಬಂದಿವರ್ಗದವರು ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಕಛೇರಿ ಮುಖ್ಯಸ್ಥರು ಹಾಜರಾಗಬೇಕಾದ ಗ್ರೂಪ್ ಸಿ ಮತ್ತು ಡಿ ವೃಂದದ ಸಿಬ್ಬಂದಿವರ್ಗದವರನ್ನು ನಿರ್ಧರಿಸುವುದು.

ಮುಂದುವರೆಯುತ್ತಾ ದಿನಾಂಕ:04.05.2020ರಿಂದ ಅನ್ವಯಿಸುವಂತೆ ಕೆಂಪು ವಲಯವನ್ನು ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಕಛೇರಿಗಳು ಹಾಗೂ ಸರ್ಕಾರಿ /ಖಾಸಗಿ ಅನುದಾನಿತ ಕಾಲೇಜುಗಳ ಶೇಕಡಾ 100ರಷ್ಟು ಬೋಧಕ ಮತ್ತು ಬೋಧಕೇತರ ಸಿಬ್ಬಂದಿವರ್ಗದವರು ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಿದೆ.

**ಸೂಚನೆ: ಕೋವಿಡ್-19ಕ್ಕೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆಯ ಸೂಚನೆಗಳನ್ವಯ ಕಡ್ಡಾಯವಾಗಿ ಮಾಸ್ಕ್‌ಗಳನ್ನು ಧರಿಸುವುದು, ಸ್ಯಾನಿಟೈಸರ್‌ಗಳನ್ನು ಒದಗಿಸಿಕೊಳ್ಳುವುದು ಹಾಗೂ ಇನ್ನಿತರೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.**

***(ಮಾನ್ಯ ಆಯುಕ್ತರ ಆದೇಶದನ್ವಯ)***

3/5/2020
**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ

1. ಇಲಾಖಾವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.
2. ಇಲಾಖಾವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ - ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ.

ಪ್ರತಿಯನ್ನು

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.